**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತಾರನೆಯ ಅಧಿವೇಶನ**

# ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–30)**
**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 (2001ರ ಕರ್ನಾಟಕ ಅಧಿನಿಯಮ 29)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ:

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪದಾವಳಿಯ ಪ್ರತಿಯೋಜನೆ.-** ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 (2001ರ ಕರ್ನಾಟಕ ಅಧಿನಿಯಮ 29)ರಲ್ಲಿ "ಬೆಂಗಳೂರು ನಗರ ವಿಶ್ವವಿದ್ಯಾನಿಲಯ" ಎಂಬ ಪದಗಳು ಬರುವ ಕಡೆಗಳಲ್ಲೆಲ್ಲಾ "ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ" ಎಂಬ ಅಕ್ಷರಗಳನ್ನು ಮತ್ತು ಪದಗಳನ್ನು ಪ್ರತಿಯೋಜಿಸತಕ್ಕದ್ದು.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
### (ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)

ರಾಷ್ಟ್ರದಲ್ಲಿ ಆರ್ಥಿಕ ಸುಧಾರಣೆಗಳನ್ನು ಮುನ್ನಡೆಸಿದ ಹಾಗೂ ಸತತವಾಗಿ ಎರಡು ಅವಧಿಗೆ ಭಾರತದ ಪ್ರಧಾನಿಯಾಗಿ ಸೇವೆ ಸಲ್ಲಿಸಿದ ಪ್ರಸಿದ್ದ ಅರ್ಥಶಾಸ್ತ್ರಜ್ಞ, ಶಿಕ್ಷಣ ತಜ್ಞ, ನಿಯಮನಿಷ್ಟ ಅಧಿಕಾರಿ ಮತ್ತು ರಾಜ್ಯನೀತಿಜ್ಞ ಡಾ. ಮನಮೋಹನ್ ಸಿಂಗ್, ಅವರ ಖ್ಯಾತಿಯನ್ನು ಗೌರವಿಸಲು "ಬೆಂಗಳೂರು ನಗರ ವಿಶ್ವವಿದ್ಯಾನಿಲಯ"ವನ್ನು "ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ" ಎಂದು ಮರುನಾಮಕರಣ ಮಾಡಲು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 (2001ರ ಕರ್ನಾಟಕ ಅಧಿನಿಯಮ 29)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

## ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಯಾವುದೇ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ಡಾ. ಎಂ.ಸಿ. ಸುಧಾಕರ್**
ಉನ್ನತ ಶಿಕ್ಷಣ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

**ಅನುಬಂಧ**

**ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ರ**

**(2001ರ ಕರ್ನಾಟಕ ಅಧಿನಿಯಮ ಸಂಖ್ಯೆ 29) ಉದ್ಧೃತ ಭಾಗ**

**XXX XXX XXX**

**ಅಧ್ಯಾಯ II**

**ವಿಶ್ವವಿದ್ಯಾನಿಲಯಗಳು**

**3. ವಿಶ್ವವಿದ್ಯಾನಿಲಯಗಳ ಸ್ಥಾಪನೆ ಮತ್ತು ನಿಗಮನ.-**

**XXX XXX XXX**

(1ಎಫ್) ಬೆಂಗಳೂರು ಸೆಂಟ್ರಲ್ ಕಾಲೇಜು ಕ್ಯಾಂಪಸ್‌ನಲ್ಲಿ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರುವ ಮತ್ತು ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು, ಬೆಂಗಳೂರು; ಮಹಾರಾಣಿ ಮಹಿಳಾ ಕಲಾ, ವಾಣಿಜ್ಯ ಮತ್ತು ವ್ಯವಸ್ಥಾಪನಾ ಕಾಲೇಜು, ಬೆಂಗಳೂರು ಮತ್ತು ಶ್ರೀಮತಿ ವಿ.ಎಚ್.ಡಿ. ಕೇಂದ್ರೀಯ ಗೃಹವಿಜ್ಞಾನ ಸಂಸ್ಥೆ, ಬೆಂಗಳೂರು, ಸರ್ಕಾರಿ ವಿಜ್ಞಾನ ಕಾಲೇಜು (ಸ್ವಾಯತ್ತ), ನೃಪತುಂಗ ರಸ್ತೆ, ಬೆಂಗಳೂರು, ಇವುಗಳನ್ನು ಹೊರತುಪಡಿಸಿ, ಕರ್ನಾಟಕ ವಿಧಾನಸಭಾ ಕ್ಷೇತ್ರಗಳಾದ ಬೆಂಗಳೂರು ಜಿಲ್ಲೆಯ ಶಾಂತಿನಗರ, ಬ್ಯಾಟರಾಯನಪುರ, ಯಲಹಂಕ, ಮಲ್ಲೇಶ್ವರಂ, ಹೆಬ್ಬಾಳ, ಶಿವಾಜಿನಗರ, ಗಾಂಧಿನಗರ, ಚಾಮರಾಜಪೇಟೆ, ಚಿಕ್ಕಪೇಟೆ, ಬಸವನಗುಡಿ, ಬಿಟಿಎಂ ಲೇಔಟ್, ಜಯನಗರ ಮತ್ತು ರಾಜಾಜಿನಗರವನ್ನು ಒಳಗೊಂಡಿರುವ ಪ್ರದೇಶಗಳ ಮೇಲೆ ಪ್ರಾದೇಶಿಕ ಅಧಿಕಾರ ವ್ಯಾಪ್ತಿಯೊಂದಿಗೆ ಸಂಯೋಜನೆಗೊಳಿಸುವ ವಿಶ್ವವಿದ್ಯಾನಿಲಯವಾಗಿ (affiliating university) ಬೆಂಗಳೂರು ನಗರ ವಿಶ್ವವಿದ್ಯಾಲಯ ವನ್ನು ಸ್ಥಾಪಿಸತಕ್ಕದ್ದು.

**XXX XXX XXX**

**5. ಅಧಿಕಾರ ವ್ಯಾಪ್ತಿ, ವಿಶೇಷಾಧಿಕಾರ ಇತ್ಯಾದಿಗಳಿಗೆ ಪ್ರವೇಶಾವಕಾಶ.-**

**XXX XXX XXX**

(9) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2015ನ್ನು ಜಾರಿಗೊಳಿಸುವುದಕ್ಕೆ ಮೊದಲು ಕರ್ನಾಟಕ ವಿಧಾನಸಭಾ ಕ್ಷೇತ್ರಗಳಾದ ಬೆಂಗಳೂರು ಜಿಲ್ಲೆಯ ಶಾಂತಿನಗರ, ಬ್ಯಾಟರಾಯನಪುರ, ಯಲಹಂಕ, ಮಲ್ಲೇಶ್ವರಂ, ಹೆಬ್ಬಾಳ, ಶಿವಾಜಿನಗರ, ಗಾಂಧಿನಗರ, ಚಾಮರಾಜಪೇಟೆ, ಚಿಕ್ಕಪೇಟೆ, ಬಸವನಗುಡಿ, ಬಿಟಿಎಂ ಲೇಔಟ್, ಜಯನಗರ ಮತ್ತು ರಾಜಾಜಿನಗರ ಇಲ್ಲಿರುವ ಕಾಲೇಜು ಅಥವಾ ಶೈಕ್ಷಣಿಕ ಸಂಸ್ಥೆಗಳು **ಬೆಂಗಳೂರು ವಿಶ್ವವಿದ್ಯಾನಿಲಯ**ದಿಂದ ಅನುಭವಿಸುತ್ತಿರುವ ಯಾವುದೇ ವಿಶೇಷಾಧಿಕಾರವನ್ನು ಈ ಸಂಬಂಧದಲ್ಲಿ ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದಂಥ ದಿನಾಂಕದಿಂದ ಜಾರಿಗೆ ಬರುವಂತೆ ಹಿಂತೆಗೆದುಕೊಳ್ಳಲಾಗಿದೆ ಎಂಬು ಭಾವಿಸತಕ್ಕದ್ದು ಮತ್ತು ಬೆಂಗಳೂರು ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಈ ಹಿಂದೆ ಪ್ರವೇಶ ಪಡೆದುಕೊಂಡಿದ್ದ ಅಥವಾ ಸಂಯೋಜಿತವಾಗಿದ್ದ ಎಲ್ಲ ಅಂಥ ಕಾಲೇಜುಗಳು ಅಥವಾ ಶೈಕ್ಷಣಿಕ ಸಂಸ್ಥೆಗಳು ಬೆಂಗಳೂರು ನಗರ

ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಪ್ರವೇಶ ಪಡೆದುಕೊಂಡಿವೆ ಎಂದು ಅಥವಾ ಅದಕ್ಕೆ ಸಂಯೋಜಿತವಾಗಿವೆ ಎಂದು ಭಾವಿಸತಕ್ಕದ್ದು.

**XXX XXX XXX**

(11) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2019ರ ಪ್ರಾರಂಭಕ್ಕೆ ಮೊದಲು ಕರ್ನಾಟಕ ವಿಧಾನಸಭಾ ಕ್ಷೇತ್ರವಾದ ಗಾಂಧಿನಗರದಲ್ಲಿ ಇರುವ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು, ಬೆಂಗಳೂರು, ಮಹಾರಾಣಿ ಮಹಿಳಾ ಕಲಾ, ವಾಣಿಜ್ಯ ಮತ್ತು ವ್ಯವಸ್ಥಾಪನಾ ಕಾಲೇಜು, ಬೆಂಗಳೂರು ಮತ್ತು ಶ್ರೀಮತಿ ವಿ.ಎಚ್.ಡಿ ಕೇಂದ್ರೀಯ ಗೃಹ ವಿಜ್ಞಾನ ಸಂಸ್ಥೆ, ಬೆಂಗಳೂರು ಇವುಗಳು **ಬೆಂಗಳೂರು ನಗರ ವಿಶ್ವವಿದ್ಯಾನಿಲಯ**ದಿಂದ ಅನುಭವಿಸುತ್ತಿರುವ ಯಾವುದೇ ವಿಶೇಷಾಧಿಕಾರವನ್ನು, ರಾಜ್ಯ ಸರ್ಕಾರವು ಈ ಸಂಬಂಧದಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ದಿನಾಂಕದಿಂದ ಜಾರಿಗೆ ಬರುವಂತೆ ಹಿಂತೆಗೆದುಕೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು ಮತ್ತು **ಬೆಂಗಳೂರು ನಗರ ವಿಶ್ವವಿದ್ಯಾನಿಲಯ**ದ ವಿಶೇಷಾಧಿಕಾರಗಳಿಗೆ ಈ ಹಿಂದೆ ಪ್ರವೇಶ ಪಡೆದುಕೊಂಡಿದ್ದ ಅಥವಾ ಸಂಯೋಜಿತವಾಗಿದ್ದ ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು, ಬೆಂಗಳೂರು, ಮಹಾರಾಣಿ ಮಹಿಳಾ ಕಲಾ, ವಾಣಿಜ್ಯ ಮತ್ತು ವ್ಯವಸ್ಥಾಪನಾ ಕಾಲೇಜು, ಬೆಂಗಳೂರು ಮತ್ತು ಶ್ರೀಮತಿ ವಿ.ಎಚ್.ಡಿ ಕೇಂದ್ರೀಯ ಗೃಹ ವಿಜ್ಞಾನ ಸಂಸ್ಥೆ, ಬೆಂಗಳೂರು ಇವುಗಳು ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು ಅಥವಾ ವಿದ್ಯಾಲಯಗಳಾಗಿ ಸದರಿ ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಪ್ರವೇಶ ಪಡೆದುಕೊಂಡಿವೆ ಎಂದು ಅಥವಾ ಅದಕ್ಕೆ ಸಂಯೋಜಿತವಾಗಿದೆ ಎಂದು ಭಾವಿಸತಕ್ಕದ್ದು.

**XXX XXX XXX**

(14) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ಅಧಿನಿಯಮ, 2020ರ ಪ್ರಾರಂಭಕ್ಕೆ ಮೊದಲು ಕರ್ನಾಟಕ ವಿಧಾನಸಭಾ ಕ್ಷೇತ್ರವಾದ ಶಿವಾಜಿನಗರದಲ್ಲಿ ಇರುವ ಸರ್ಕಾರಿ ವಿಜ್ಞಾನ ಕಾಲೇಜು (ಸ್ವಾಯತ್ತ), ನೃಪತುಂಗ ರಸ್ತೆ, ಬೆಂಗಳೂರು, ಇದು ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಲಯದಿಂದ ಅನುಭವಿಸುತ್ತಿರುವ ಯಾವುದೇ ವಿಶೇಷಾಧಿಕಾರವನ್ನು, ರಾಜ್ಯ ಸರ್ಕಾರವು ಈ ಸಂಬಂಧದಲ್ಲಿ ನಿರ್ದಿಷ್ಟಪಡಿಸಬಹುದಾದ ಅಂಥ ದಿನಾಂಕದಿಂದ ಜಾರಿಗೆ ಬರುವಂತೆ ಹಿಂತೆಗೆದುಕೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು ಮತ್ತು ಬೆಂಗಳೂರು ಕೇಂದ್ರ ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಈ ಹಿಂದೆ ಪ್ರವೇಶ ಪಡೆದುಕೊಂಡಿದ್ದ ಅಥವಾ ಸಂಯೋಜಿತವಾಗಿದ್ದ ಸರ್ಕಾರಿ ವಿಜ್ಞಾನ ಕಾಲೇಜು (ಸ್ವಾಯತ್ತ), ನೃಪತುಂಗ ರಸ್ತೆ, ಬೆಂಗಳೂರು ಇದು ನೃಪತುಂಗ ವಿಶ್ವವಿದ್ಯಾನಿಲಯ, ಬೆಂಗಳೂರು, ಇದರ ಘಟಕ ಕಾಲೇಜು ಅಥವಾ ವಿದ್ಯಾಲಯಗಳಾಗಿ ಸದರಿ ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಪ್ರವೇಶ ಪಡೆದುಕೊಂಡಿವೆ ಎಂದು ಅಥವಾ ಅದಕ್ಕೆ ಸಂಯೋಜಿತವಾಗಿದೆ ಎಂದು ಭಾವಿಸತಕ್ಕದ್ದು.

**XXX XXX XXX**

**14. ಕುಲಪತಿ.- XXX XXX XXX**

(4) ಶೋಧನಾ ಸಮಿತಿಯು, ಖ್ಯಾತ ಶಿಕ್ಷಣ ತಜ್ಞರಾದ ಮೂರು ವ್ಯಕ್ತಿಗಳ ಒಂದು ಪಟ್ಟಿಯನ್ನು ಅಕಾರಾದಿ ಕ್ರಮದಲ್ಲಿ ರಾಜ್ಯಸರ್ಕಾರಕ್ಕೆ ಸಲ್ಲಿಸತಕ್ಕದ್ದು ಮತ್ತು ರಾಜ್ಯ ಸರ್ಕಾರವು ಆ ಪಟ್ಟಿಯನ್ನು ಕುಲಾಧಿಪತಿಯವರಿಗೆ

ಕಳುಹಿಸತಕ್ಕದ್ದು, ಅವರು ಅರ್ಹತೆ, ಸಮದರ್ಶಿತ್ವ ಮತ್ತು ಸಾಮಾಜಿಕ ನ್ಯಾಯ ಇವುಗಳನ್ನು ಗಮನದಲ್ಲಿಟ್ಟುಕೊಂಡು ಮತ್ತು ರಾಜ್ಯ ಸರ್ಕಾರದ ಸಹಮತಿಯೊಡನೆ ಪಟ್ಟಿಯಿಂದ ಒಬ್ಬ ವ್ಯಕ್ತಿಯನ್ನು ಕುಲಪತಿಯಾಗಿ ನೇಮಕ ಮಾಡತಕ್ಕದ್ದು:

ಪರಂತು, ಕುಲಾಧಿಪತಿಯವರು ಅವಶ್ಯವೆಂದು ಪರಿಗಣಿಸಿದರೆ ರಾಜ್ಯ ಸರ್ಕಾರದ ಸಹಮತಿಯೊಡನೆ ಎರಡನೆಯ ಪಟ್ಟಿಯನ್ನು ತರಿಸಿಕೊಳ್ಳಬಹುದು ಮತ್ತು ಶೋಧನಾ ಸಮಿತಿಯು ಎರಡನೆಯ ಪಟ್ಟಿಯನ್ನು ಸಲ್ಲಿಸತಕ್ಕದ್ದು ಹಾಗೂ ಅದು ಅಂತಿಮವಾಗಿರತಕ್ಕದ್ದು.

ಮತ್ತು ಪರಂತು, ಸಾಧ್ಯವಾದಷ್ಟು ಮಟ್ಟಿಗೆ ಒಬ್ಬ ಮಹಿಳೆಯೇ ಬಿಜಾಪುರದಲ್ಲಿರುವ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಕುಲಪತಿಯಾಗತಕ್ಕದ್ದು:

ಮತ್ತೂ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದೇನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕಮಾಡತಕ್ಕದ್ದು.

ಮತ್ತೂ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ತುಮಕೂರು ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕಮಾಡತಕ್ಕದ್ದು.

ಮತ್ತೂ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ದಾವಣಗೆರೆ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕಮಾಡತಕ್ಕದ್ದು.

ಮತ್ತೂ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾನಿಲಯ ಮತ್ತು ರಾಣಿಚನ್ನಮ್ಮ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕಮಾಡತಕ್ಕದ್ದು.

ಅಲ್ಲದೇ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಮತ್ತು ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕ ಮಾಡತಕ್ಕದ್ದು.

ಅಲ್ಲದೇ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ರಾಯಚೂರು ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕ ಮಾಡತಕ್ಕದ್ದು.

ಅಲ್ಲದೇ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ಮಹಾರಾಣಿ ಕ್ಲಸ್ಟರ್

ವಿಶ್ವವಿದ್ಯಾನಿಲಯ, ಬೆಂಗಳೂರು ಮತ್ತು ಮಂಡ್ಯ ವಿಶ್ವವಿದ್ಯಾನಿಲಯ, ಮಂಡ್ಯ ಇವುಗಳ ಪ್ರಥಮ ಕುಲಪತಿಯವರನ್ನು ನೇಮಕ ಮಾಡತಕ್ಕದ್ದು.

ಅಲ್ಲದೇ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳು ಮತ್ತು ಕೆಲವು ಇತರ ಕಾನೂನು (ಎರಡನೇ ತಿದ್ದುಪಡಿ) ಅಧಿನಿಯಮ, 2020 ಪ್ರಾರಂಭವಾದ ತರುವಾಯ ಮೂಲ ಅಧಿನಿಯಮದ ಅಡಿಯಲ್ಲಿ ಸ್ಥಾಪಿಸಲಾದ ಯಾವುದೇ ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಯವರನ್ನು ನೇಮಕ ಮಾಡತಕ್ಕದ್ದು.

**XXX XXX XXX**

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಕಾಸೂ , ಪ್ರತಿಗಳು 300, 12ನೇ ಆಗಸ್ಟ್ 2025